**ಕರ್ನಾಟಕ ಸರ್ಕಾರ**

**ವಾಣಿಜ್ಯ ತೆರಿಗೆ ಇಲಾಖೆ**

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡವಳಿಗಳು**

ವಿಷಯ: 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿ ಕೆಲವು ಅಡುಗೆ ಮನೆ/ ಗೃಹೋಪಯೋಗಿ ಧಾರಕಗಳ ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ಹ್ಯಾಮಿಲ್ಟನ್ ಹೌಸ್‌ವೇರ್ಸ್ ಪ್ರೈ. ಲಿ. ಬೆಂಗಳೂರು-560026. ಇವರ ಅರ್ಜಿಯ ದಿ.23-04-2013, (ಟಿನ್: 29430210217)

***

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿಯಲ್ಲಿ ನೋಂದಣಿದಾರರಾದ ಮೆ: ಹ್ಯಾಮಿಲ್ಟನ್ ಹೌಸ್‌ವೇರ್ಸ್ ಪ್ರೈ. ಲಿ., ನಂ.114/14, 1ನೇ ಮಹಡಿ, ಪಟೇಲ್ ಪುಟ್ಟಯ್ಯ ಇಂಡಸ್ಟ್ರಿಯಲ್ ಎಸ್ಟೇಟ್, ಬಿಹೆಚ್‌ಇಎಲ್ ಫ್ಯಾಕ್ಟರಿ ಹಿಂದೆ, ದೀಪಾಂಜಲಿನಗರ, ಮೈಸೂರು ರಸ್ತೆ, ಬೆಂಗಳೂರು – 5600326 ಇವರು ಮೇಲ್ಕಂಡ ಅರ್ಜಿಯಲ್ಲಿ ಕೆಲವು ಅಡುಗೆ ಮನೆ/ ಗೃಹೋಪಯೋಗಿ ಧಾರಕಗಳ ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಮೇರೆಗೆ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರು ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**ಸ್ಪಷ್ಟೀಕರಣ ಆದೇಶ ಸಂಖ್ಯೆ:ಸಿಎಲ್‌ಆರ್/ಸಿಆರ್. 07/13-14, ದಿ. 30-01-2014**

ಅಡುಗೆ ಮನೆ ಅಥವಾ ಗೃಹಗಳಲ್ಲಿ ಧಾರಕಗಳಾಗಿ ಬಳಸುವ ಪ್ಲಾಸ್ಟಿಕ್, ಸ್ಟೀಲ್, ಮಲಾಮೈನ್ ಮತ್ತು ಗಾಜಿನಿಂದ ತಯಾರಿಸಿದ 'ಟಿಫಿನ್ ಕ್ಯಾರಿಯರ್‌ಗಳು, ಬೇಸಿನ್‌ಗಳು, ಬೌಲ್‌ಗಳು, ಟಂಬ್ಲರ್‌ಗಳು, ಜಾರ್‌ಗಳು ಮತ್ತು ಜಗ್ಗುಗಳು' ದಿನಾಂಕ:05.03.2013ರ ಅಧಿಸೂಚನೆ ಸಂಖ್ಯೆ: ಎಫ್‌ಡಿ 36 ಸಿಎಸ್‌ಎಲ್ 2013 (II) ರಂತೆ ದಿನಾಂಕ: 01.04.2013ರಿಂದ ಶೇಕಡಾ 5.5ರಷ್ಟು ತೆರಿಗೆಗೊಳಪಡುತ್ತವೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ.

(ಅಜಯ್ ಸೇಠ್)
ವಾಣಿಜ್ಯ ತೆರಿಗೆಗಳ ಆಯುಕ್ತರು,
(ಕರ್ನಾಟಕ),ಬೆಂಗಳೂರು.

ವಾಣಿಜ್ಯ ತೆರಿಗೆಗಳ ಆಯುಕ್ತರು
(ಕರ್ನಾಟಕ), ಬೆಂಗಳೂರು